O.S.No.:253/2020
P.W.:3

ಈ ದಿನ ದಿಃ02.09.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಪಾಟೀ ಸವಾಲುಃ- ಪ್ರತಿವಾದಿಗಳ ಪರ ವಕೀಲರಾದ ಶ್ರೀ ಎಸ್.ವಿ.ವಿ ರವರಿಂದಃ-**

1. ಈ ದಾವೆಯನ್ನು ವಾದಿಯು ಹಿಸ್ಸೆ ಕೋರಿ ಒಟ್ಟು 9ಜನರ ವಿರುದ್ದ ಹೂಡಿರುತ್ತಾರೆ. ಈ ದಾವೆಯನ್ನು ವಾದಿಯು ಜಮೀನಿಗೆ ಸಂಬಂಧಿಸಿದಂತೆ ಹೂಡಿರುತ್ತಾರೆ. ಅದರ ಸರ್ವೆ ನಂಬರ್ ಮತ್ತು ವಿಸ್ತೀರ್ಣ ನನಗೆ ಹೇಳಲು ಬರುವುದಿಲ್ಲ. ನಮ್ಮ ಮನೆಗೂ ವಾದಿಯ ಮನೆಗೂ 500ಅಡಿ ಅಂತರ ಇರುತ್ತದೆ. ವಾದಿ ಮತ್ತು ಪ್ರತಿವಾದಿಗಳ ಕುಟುಂಬದಲ್ಲಿ ಅವರ ಆಸ್ತಿಗಳಿಗೆ ಸಂಬಂಧಿಸಿದಂತೆ ಏನೇನು ವ್ಯವಹಾರಗಳು ಆಗಿವೆ ಎಂಬ ಬಗ್ಗೆ ನನಗೆ ಮಾಹಿತಿ ಇರುತ್ತದೆ. ವಾದಿಯ ತಂದೆಯವರು ತಮ್ಮ ಹೆಣ್ಣುಮಕ್ಕಳು ಮದುವೆ ಕಾರ್ಯಕ್ರಮಗಳನ್ನು ಮಾಡಲು ಬಹಳಷ್ಟು ಸಾಲ ಮಾಡಿಕೊಂಡಿದ್ದರು ಎಂದರೆ ಸರಿಯಲ್ಲ.

2. ದಿನಾಂಕ.31.01.2005ರಂದು ವಾದಿ, 3 ಮತ್ತು 6ನೇ ಪ್ರತಿವಾದಿಗಳು ಸೇರಿಕೊಂಡು ತಮ್ಮ ಕುಟುಂಬದ ಆಸ್ತಿಗಳಿಗೆ ಸಂಬಂಧಿಸಿದಂತೆ ಒಂದು ನೋಂದಾಯಿತ ವಿಭಾಗ ಪತ್ರ ಮಾಡಿಕೊಂಡಿರುತ್ತಾರೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಆದರೆ ವಾದಿಗೆ ಯಾವುದೇ ಆಸ್ತಿಯಲ್ಲಿ ಹಿಸ್ಸೆ ಕೊಟ್ಟಿಲ್ಲ ಎಂದು

ನುಡಿಯುತ್ತಾರೆ. ಮನೆಯ ಸಾಲ ಇದ್ದ ಕಾರಣಕ್ಕೆ ಸದರಿ ಸಾಲವನ್ನು ತೀರಿಸುವ ಹೊಣೆಗಾರಿಕೆಯ ಷರತ್ತಿನ ಮೇರೆಗೆ 6ನೇ ಪ್ರತಿವಾದಿಗೆ ದಾವಾಸ್ವತ್ತು ಮತ್ತು ಇತರ ಸ್ವತ್ತುಗಳನ್ನು ಆತನ ಹಿಸ್ಸೆಗೆ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ನಾನು ಬೇರೆ ಬೇರೆ 4-5 ಪ್ರಕರಣಗಳಲ್ಲಿ ಸಾಕ್ಷಿ ನುಡಿದಿರುತ್ತೇನೆ.

3. ನನ್ನ ಮುಖ್ಯವಿಚಾರಣ ಪ್ರಮಾಣ ಪತ್ರದ ಸಂಗತಿಗಳನ್ನು ನಾನು ಹೇಳಿ ಬರೆಸಿರುತ್ತೇನೆ. ನನಗೆ ವಾದಿ ಮತ್ತು ಪ್ರತಿವಾದಿಗಳ ಕುಟುಂಬದ ಬಗ್ಗೆ ಯಾವುದೇ ಮಾಹಿತಿ ಇಲ್ಲದೆ ಇದ್ದರು ವಾದಿಗೆ ಸಹಾಯ ಮಾಡಲು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. 20ವರ್ಷಗಳ ಹಿಂದೆಯೇ ವಾದಿ ಮತ್ತು ಆತನ ಸಹೋದರರು ವಿಭಾಗಕೊಂಡು ಬೇರೆ ಬೇರೆ ಆಗಿರುತ್ತಾರೆ ಎಂದರೆ ಸರಿ.

**ಮರುವಿಚಾರಣೆ:- ಇಲ್ಲ.**

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**